ದಿಃ 17.04.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಎಲ್.ವಿ.ಜಿ., ವಕೀಲರಿಂದ 1 ನೇ ಪ್ರತಿವಾದಿಯರ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ಚಿಕ್ಕಮಗಳೂರು ಜಿಲ್ಲಾ ಮಹಿಳಾ ಸಹಕಾರಿ ಬ್ಯಾಂಕ್ ನಲ್ಲಿ ನನ್ನ ತಾಯಿ ಲಕ್ಷ್ಮಮ್ಮ ರವರು ಹೊಂದಿರುವ ಖಾತೆಯ ಪಾಸ್ ಪುಸ್ತಕವನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.2 ಎಂದು, ಚಿಕ್ಕಮಗಳೂರು ಜಿಲ್ಲಾ ಮಹಿಳಾ ಸಹಕಾರಿ ಬ್ಯಾಂಕ್ ನಲ್ಲಿ ನನ್ನ ಮತ್ತು ನನ್ನ ತಾಯಿ ಲಕ್ಷ್ಮಮ್ಮ ರವರ ಜಂಟಿ ಹೆಸರಿನಲ್ಲಿ ಹೊಂದಿರುವ ಖಾತೆಯ ಪಾಸ್ ಪುಸ್ತಕವನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.3 ಎಂದು, ನನ್ನ ತಾಯಿ ನನಗೆ ದಿಃ 05.09.2018 ರಂದು ಬರೆದುಕೊಟ್ಟಿರುವ ವೀಲು ನಾಮೆಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.4 ಎಂದು, ದಿಃ 26.06.1980 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.5 ಎಂದು, ದಿಃ 26.06.1980 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.6 ಎಂದು ಗುರುತಿಸಲಾಯಿತು.
3. ಅಂದಾಜು ನಕ್ಷೆಯ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.7 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.೯.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ದಿಃ 20.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಎಲ್.ವಿ.ಜಿ., ವಕೀಲರಿಂದ 1 ನೇ ಪ್ರತಿವಾದಿಯರ ಪರವಾಗಿ

4. ದಾವ ಐಟಂ ನಂಬರ್ 1 ಅನ್ನು ನಾನು ಮತ್ತು ಮೃತ 2 ನೇ ಪ್ರತಿವಾದಿ ಖರೀದಿಸಿದ್ದ ಬಗ್ಗೆ ದಿನಾಂಕ 31.03.2017 ರ ಕ್ರಯ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.8 ಎಂದು, ದಾವ ಐಟಂ ನಂಬರ್ 1 ರ ಖಾತಾ ಎಕ್ಸ್‌ಟ್ರಾಕ್ಟ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿ.ಡಿ.9 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಶ್ರೀ ಡಿ.ಕೆ.ಪಿ ವಕೀಲರಿಂದ ವಾದಿ ಪರವಾಗಿ

5. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು .

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರಧನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ